9/17

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ರಾಜರಾಜೇಶ್ವರಿ ನಗರ ವಲಯ

ಸಂಖ್ಯೆ:ಕಾ.ಪಾ.ಅ(ವಿ)/ರಾರಾನ/ಆ.ಮ/ 23 /2021-22 ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಕಛೇರಿ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ರಾಜರಾಜೇಶ್ವರಿ ನಗರ ವಲಯ, ಬೆಂಗಳೂರು
ದಿನಾಂಕ: 15/11/2021

ಆಡಳಿತಾತ್ಮಕ ಮಂಜೂರಾತಿ ಜ್ಞಾಪನ ಪತ್ರ

ಕಾಮಗಾರಿಯ ಹೆಸರು: Replacement of damaged UG Cable, Panel Board, poles and fittings etc at J P park ward No. 17 Of RR Nagara Zone

ಅಂದಾಜು ಮೊತ್ತ: 5.50 ಲಕ್ಷಗಳು

ಉಲ್ಲೇಖ: ವಾರ್ಡ್ ಮಟ್ಟದ ಸಾರ್ವಜನಿಕ ಕಾಮಗಾರಿಗಳ ಸ್ಥಾಯಿ ಸಮಿತಿ ಹಾಗು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯ ಅಧಿಕಾರಗಳನ್ನು ಚಲಾಯಿಸಿ ಆಡಳಿತಗಾರರ ದಿನಾಂಕ:21-09-2021 ರ ನಡಾವಳಿಗಳ ವಿಷಯ ಸಂಖ್ಯೆ-244/2021-22.

****

ಈ ಮೇಲೆ ವಿವರಿಸಿರುವ ಕಾಮಗಾರಿಯ ಅಂದಾಜು ಮೊತ್ತ **ರೂ.5.50 ಲಕ್ಷಗಳ** ಅಂದಾಜು ಪಟ್ಟಿಗೆ 2021-22 ನೇ ಸಾಲಿನ ಪಾಲಿಕೆ ಅನುಮೋದಿತ ಆಯವ್ಯಯದ ಲೆಕ್ಕಶೀರ್ಷಿಕೆ **M &R to Electrical Installations in Parks, Gardens, Play grounds and Burial GroundsP0298,** ರಡಿಯಲ್ಲಿ ಅಳವಡಿಸಿಕೊಂಡಿದ್ದು, ಈ ಕಾಮಗಾರಿಯು ಉಲ್ಲೇಖಿತದಂತೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆಯಾಗಿರುವ ಕ್ರಿಯಾಯೋಜನೆಯಲ್ಲಿ ಸೇರ್ಪಡೆಗೊಂಡಿದೆ.

ಮಾನ್ಯ ಮುಖ್ಯ ಆಯುಕ್ತರ ಕಛೇರಿ ಆದೇಶ ಸಂಖ್ಯೆ:ಮು.ಆ/ಪಿ.ಆರ್/93/2021-22, ದಿನಾಂಕ:06-07-2021 ರಲ್ಲಿ ಪಾಲಿಕೆ ಅನುದಾನದ ಕಾಮಗಾರಿಗಳಿಗೆ ಸಕ್ಷಮ ಪ್ರಾಧಿಕಾರದಿಂದ, ಕ್ರಿಯಾ ಯೋಜನೆ ಅನುಮೋದನೆ ಪಡೆದು, ಆಡಳಿತಾತ್ಮಕ ಮತ್ತು ತಾಂತ್ರಿಕ ಮಂಜೂರಾತಿಯನ್ನು ಪಡೆದು, ಟೆಂಡರ್ ಪ್ರಕ್ರಿಯೆಗಳನ್ನು ಪೂರೈಸಿ ಟೆಂಡರ್ ಅಂತಿಮಗೊಳಿಸಿ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡುವ ಮೊದಲು ಜಾಬ್ ಸಂಖ್ಯೆ ಪಡೆಯುವಂತೆ ಆದೇಶಿಸಲಾಗಿರುತ್ತದೆ.

ಆದ್ದರಿಂದ, ಈ ಮೇಲಿನ ಅಂಶಗಳ ಹಿನ್ನಲೆಯಲ್ಲಿ ಈ ಕಾಮಗಾರಿಯ ಅಂದಾಜು ಮೊತ್ತ ರೂ.5.50 ಲಕ್ಷಗಳ ಅಂದಾಜುಪಟ್ಟಿಗೆ ಮಾನ್ಯ ಆಯುಕ್ತರು ರವರ ಕಛೇರಿ ಆದೇಶ ಸಂಖ್ಯೆ: ಬಿ12(1)ಪಿ.ಆರ್/394/21-22, ದಿನಾಂಕ: 27/7/2021 ರಲ್ಲಿ ಕಾರ್ಯಪಾಲಕ ಅಭಿಯಂತರರಿಗೆ ನೀಡಿರುವ ಅಧಿಕಾರ ಪ್ರತ್ಯಾಯೋಜನೆಯನ್ವಯ ಆಡಳಿತಾತ್ಮಕ ಮಂಜೂರಾತಿ ಜ್ಞಾಪನ ಪತ್ರಕ್ಕೆ ಸಹಿ ಮಾಡಲಾಗಿದೆ. ಸದರಿ ಮಂಜೂರಾತಿಯನ್ನು ಈ ಕಛೇರಿಯ ಆಡಳಿತಾತ್ಮಕ ಮಂಜೂರಾತಿ ಪುಸ್ತಕದ ಪುಟ ಸಂಖ್ಯೆ 54-55 ರ ಕ್ರಮ ಸಂಖ್ಯೆ 23 ರಲ್ಲಿ ದಾಖಲಿಸಲಾಗಿದೆ.

ಕಾರ್ಯಪಾಲಕ ಅಭಿಯಂತರರು (ವಿದ್ಯುತ್),
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ರಾಜರಾಜೇಶ್ವರಿ ನಗರ ವಲಯ.

ಪ್ರತಿಯನ್ನು ಮಾಹಿತಿಗಾಗಿ ಸಲ್ಲಿಸಿದೆ.

1) ವಲಯ ಆಯುಕ್ತರು,ರಾ.ರಾ ನಗರ ವಲಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು. ರವರ ಮಾಹಿತಿಗಾಗಿ.
2) ಜಂಟಿ ಆಯುಕ್ತರು, ರಾ.ರಾ ನಗರ ವಲಯ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು. ರವರ ಮಾಹಿತಿಗಾಗಿ.
3) ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು. ರವರ ಮಾಹಿತಿಗಾಗಿ,
4) ಅಧೀಕ್ಷಕ ಅಭಿಯಂತರರು(ವಿದ್ಯುತ್), ಬೃಬೆಂ.ಮ.ಪಾ, ರವರ ಮಾಹಿತಿಗಾಗಿ,
5) ಕಛೇರಿ ಪ್ರತಿ